ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ನೇ.ವಿ/ಸಿಆರ್-15/2025-26(ಆರ್.ಪಿ.ಸಿ)  ದಿನಾಂಕ:03.08.2026

## ಪ್ರಕಟಣೆ

**ಉಳಿಕೆ ಮೂಲ ವೃಂದದ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಪ್ರಕಟಿಸುವ ಬಗ್ಗೆ.**

*******

**ವಿಷಯ : ಸಾಮಾನ್ಯ ಜ್ಞಾನ**

ಉಳಿಕೆ ಮೂಲ ವೃಂದದ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:02.08.2026 ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗಿದ್ದು, ಸದರಿ ಪರೀಕ್ಷೆಯ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ: 03.08.2026 ರಂದು ಪ್ರಕಟಿಸಲಾಗಿರುತ್ತದೆ.

ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಆನ್‌ಲೈನ್ ಪೋರ್ಟಲ್ https://cetonline.karnataka.gov.in/kea/ ಮೂಲಕ **ದಿನಾಂಕ:06.08.2026 ರ ಬೆಳಿಗ್ಗೆ 10:30** ಘಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ.

ಆಕ್ಷೇಪಣೆಗಳನ್ನು ಸಲ್ಲಿಸುವ ಸಂದರ್ಭದಲ್ಲಿ ಪತ್ರಿಕೆಯ ವಿವರ, ಪರೀಕ್ಷಾ ದಿನಾಂಕ, ವರ್ಷನ್ ಕೋಡ್, ಪ್ರಶ್ನೆ ಸಂಖ್ಯೆ ಹಾಗೂ ಪೂರಕ ದಾಖಲೆಗಳನ್ನು PDF ರೂಪದಲ್ಲಿ ಸಲ್ಲಿಸಬೇಕು. ಸಲ್ಲಿಸಲಾಗುವ ಪ್ರತಿ ಆಕ್ಷೇಪಣೆಗೆ ರೂ.25/-ನ್ನು ಪಾವತಿಸತಕ್ಕದ್ದು ಹಾಗೂ ಆಕ್ಷೇಪಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ. ಪ್ರಶ್ನೆ ಸಂಖ್ಯೆ, ವರ್ಷನ್ ಕೋಡ್ ನಮೂದಿಸದೇ ಇರುವ ಅಥವಾ ಅಪೂರ್ಣ/ಆಧಾರರಹಿತವಾಗಿರುವ ಹಾಗೂ ಶುಲ್ಕ ಪಾವತಿಸದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**ವಿಷಯ ತಜ್ಞರ ಸಮಿತಿಯು ಆಕ್ಷೇಪಣೆಗಳನ್ನು ಪರಿಶೀಲಿಸಿ, ತೀರ್ಮಾನಿಸುವ ಕೀ ಉತ್ತರಗಳು ಅಂತಿಮವಾಗಿರುತ್ತದೆ.**

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583  Helpline : 080 - 23 460 460.
e-mail : keauthority-ka@nic.in  Website : http://kea.kar.nic.in